## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- . ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳಿಗೆ ಸೃಜಿಸಲಾದ ಸ್ಟ್ಯಾಫ್ ನರ್ಸ್ ಹುದ್ದೆಗಳಿಗೆ ನಿಗಧಿಪಡಿಸಿದ ವೇತನ ಶ್ರೇಣಿಯನ್ನು ರೂ.16000-29600ರ ಬದಲಾಗಿ ರೂ.17650-32000ಗಳಿಗೆ ನಿಗಧಿಪಡಿಸಿ ತಿದ್ದುಪಡಿ ಅಧಿಸೂಚನೆ ಹೊರಡಿಸುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಸಕಇ 70 ಮೊದೇಶಾ 2010, ದಿನಾಂಕ:21-01-2011.

2. ಕಾರ್ಯನಿರ್ವಾಹಕ ನಿರ್ದೇಶಕರ ಪತ್ರ ಸಂಖ್ಯೆ: ಕವಶಿಸಸ/ಆಡಳಿತ(1)/ಸಿಆರ್-3/2014-15 ದಿ:19-02-2016

*****

**ಪ್ರಸ್ತಾವನೆ:**

ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:21-01-2011ರ ಆದೇಶದಲ್ಲಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳನ್ನು ಆದೇಶದ ಅಧಿಸೂಚನೆಯಲ್ಲಿರುವಂತೆ ಅನುಮೋದಿಸಿ ಆದೇಶಿಸಿದೆ.

ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ:19-02-2016ರ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳಲ್ಲಿ ಸ್ಟಾಫ್ ನರ್ಸ್‌ಗಳಿಗೆ ನಿಗಧಿಪಡಿಸಿದ ವೇತನ ಶ್ರೇಣಿ ರೂ.16000-29600ಕ್ಕೆ ಕ್ರಮವಾಗಿರುವುದಾಗಿ ತಿಳಿಸಿರುತ್ತಾರೆ ಹಾಗೂ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಟಾಫ್ ನರ್ಸ್‌ಗಳು ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳಲ್ಲಿ ನಿಗಧಿಪಡಿಸಿದ ವಿದ್ಯಾರ್ಹತೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಸ್ಟಾಫ್ ನರ್ಸ್‌ಗಳಿಗೆ ನಿಗಧಿಪಡಿಸಿದ ವಿದ್ಯಾರ್ಹತೆಗೆ ಸಮಾನವಾಗಿದ್ದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸ್ಟಾಫ್ ನರ್ಸ್‌ಗಳಿಗೆ ನಿಗಧಿಪಡಿಸಿದ ವೇತನ ಶ್ರೇಣಿ ರೂ.17650-32000ಗಳಾಗಿದ್ದು, ಇದೇ ವೇತನ ಶ್ರೇಣಿಯನ್ನು ಅಳವಡಿಸಿಕೊಳ್ಳಲು ಕೋರಿದ್ದು, ಈ ಹಿನ್ನೆಲೆಯಲ್ಲಿ ಈ ಬಗ್ಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು 65ನೇ ಆಡಳಿತ ಮಂಡಳ ಸಭೆಯಲ್ಲಿ ತೀರ್ಮಾನಿಸಿದಂತೆ ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳಲ್ಲಿ ಷೆಡ್ಯೂಲ್ ಒಂದಕ್ಕೆ ಸೂಕ್ತ ತಿದ್ದುಪಡಿ ಮಾಡುವಂತೆ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 195 ಮೋದೇಶಾ 2016 ಬೆಂಗಳೂರು, ದಿನಾಂಕ:30-08-2016,**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ವಿನಿಯಮಗಳು-2011ಗಳಲ್ಲಿನ ಷೆಡ್ಯೂಲ್ ಒಂದರಲ್ಲಿ ಸ್ಟಾಫ್ ನರ್ಸ್‌ಗಳ ವೃಂದದ ಹುದ್ದೆಗಳಿಗೆ ವೇತನ ಶ್ರೇಣಿಯನ್ನು ರೂ.17650-32000ಗಳಿಗೆ ಭವಿಷ್ಯವರ್ತಿಯಾಗಿ ಪರಿಷ್ಕರಿಸುವಂತೆ ಆದೇಶಿಸಿದೆ.

...2

ಪರಿಷ್ಕೃತ ವೇತನ ಶ್ರೇಣಿಯಲ್ಲಿ ಸ್ಟಾಫ್ ನರ್ಸ್‌ಗಳ ವೇತನವನ್ನು ಕೆ.ಸಿ.ಎಸ್.ಆರ್. ನಿಯಮ - 43ರನ್ವಯ ನಿಗಧಿಪಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 232 ವೆಚ್ಚ-3/2016, ದಿನಾಂಕ:14.06.2016 ಹಾಗೂ ಸರ್ಕಾರದ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 03 ಟಿಎಫ್‌ಪಿ 2016, ದಿನಾಂಕ:02-04-2016ರಲ್ಲಿ ಸರ್ಕಾರದ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎಸ್.ಸುಮತಿ) 30/8
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ಮುಂದಿನ ರಾಜ್ಯಪತ್ರ ಸಂಚಿಕೆಯಲ್ಲಿ ಪ್ರಕಟಿಸಿ 300 ಪ್ರತಿಗಳನ್ನು ಒದಗಿಸುವುದು.

ಪ್ರತಿಗಳು:
1. ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ವಿಧಾನಸೌಧ, ಬೆಂಗಳೂರು
3. ಆಯುಕ್ತರು ,ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
6. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
9. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು
10. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
11. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
12. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ, ಬೆಂಗಳೂರು.
13. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿ, ಇವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.
15. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಕಾಸಸೌಧ, ಬೆಂಗಳೂರು
16. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.